**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/116/ಜೀವವೈವಿಧ್ಯತೆ/2016-17

ದಿನಾಂಕ:16.12.2016.

# ಸುತ್ತೋಲೆ

ವಿಷಯ: ರಾಷ್ಟ್ರೀಯ ಜೀವ ವೈವಿಧ್ಯತೆ ಕಾರ್ಯಯೋಜನೆಯನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯಗತಗೊಳಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 01 ಯುಇಸಿ 2016 ದಿನಾಂಕ:22.09.2016.
2. ಶ್ರೀ ಟಿ. ಎಂ. ವಿಜಯ ಭಾಸ್ಕರ್, ಭಾ.ಆ.ಸೇ. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ರವರ ಅ.ಸ.ಪ.ಸಂಖ್ಯೆ:ಅಪಜೀ 275 ಇಎನ್‌ವಿ 2014 ದಿನಾಂಕ:02.08.2016.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (2)ರ ಪತ್ರದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಇಲಾಖೆ, ಇವರು ಕಾಲೇಜು ಶಿಕ್ಷಣ ಇಲಾಖೆಯಲ್ಲಿ ರಾಷ್ಟ್ರೀಯ ಜೀವವೈವಿಧ್ಯತೆ ಕಾರ್ಯಯೋಜನೆಯನ್ನು ಕಾರ್ಯಗತಗೊಳಿಸುವಂತೆ ಸೂಚಿಸಿದ್ದು, ಈ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಉಲ್ಲೇಖ (1)ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಮಂತ್ರಾಲಯವು ಜೀವವೈವಿಧ್ಯತೆಯನ್ನು ಉಳಿಸಿ ತನ್ಮೂಲಕ ಮಾನವನ ಅಭಿವೃದ್ಧಿ ಮತ್ತು ಬಡತನವನ್ನು ನಿರ್ಮೂಲನೆ ಮಾಡುವ ದೃಷ್ಟಿಯಿಂದ **ರಾಷ್ಟ್ರೀಯ ಜೀವ ವೈವಿಧ್ಯತೆ ಕಾರ್ಯಯೋಜನೆ (National Bio-diversity action plan) – 2014** ನ್ನು ತಯಾರಿಸಿದ್ದು, ಈ ಸಂಬಂಧ ಕರ್ನಾಟಕ ರಾಜ್ಯ ಜೀವವೈವಿಧ್ಯ ಮಂಡಳಿಯು ಕಾಲೇಜು ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡ ಎರಡು ಗುರಿಗಳನ್ನು ಗುರುತಿಸಿರುತ್ತಾರೆ.

1. 2020ನೇ ಸಾಲಿನ ವೇಳೆಗೆ, ರಾಷ್ಟ್ರದ ಗಣನೀಯ ಪ್ರಮಾಣದ ಜನರು, ವಿಶೇಷತಃ ಯುವಜನತೆ ಜೀವವೈವಿಧ್ಯತೆಯ ಮೌಲ್ಯಗಳ, ಜೀವವೈವಿಧ್ಯತೆಯ ಸಂರಕ್ಷಣೆಗೆ ವಿದ್ಯಾರ್ಥಿಗಳು ತೆಗೆದುಕೊಳ್ಳಬಹುದಾದ ಕ್ರಮಗಳು
2. 2020ನೇ ಸಾಲಿನ ವೇಳೆಗೆ, ಜೀವವೈವಿಧ್ಯ ರಕ್ಷಣೆಗೆ ಸಂಬಂಧಪಟ್ಟ ಯೋಜನೆಯ ಪರಿಣಾಮಕಾರೀ ಅನುಷ್ಠಾನಕ್ಕೆ ಲಭ್ಯವಿರುವ ಆರ್ಥಿಕ, ಮಾನವಿಕ ಮತ್ತು ತಾಂತ್ರಿಕ ಸಂಪನ್ಮೂಲಗಳನ್ನು ವೃದ್ಧಿಗೊಳಿಸಲು ಕ್ರಮಗಳು.

ಕಾಲೇಜು ಶಿಕ್ಷಣ ಇಲಾಖೆಯ ವತಿಯಿಂದ ಈ ಗುರಿಗಳನ್ನು ಸಾಧಿಸುವತ್ತ ಗಂಭೀರ ಪ್ರಯತ್ನಗಳನ್ನು ಮಾಡಲು ಉದ್ದೇಶಿಸಿದ್ದು, ತತ್ಸಂಬಂಧವಾಗಿ ಪ್ರಾಂಶುಪಾಲರು ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳುವುದು:

1. ಕಾಲೇಜಿನ ಓರ್ವ ಅಧ್ಯಾಪಕರನ್ನು ಈ ಕಾರ್ಯಕ್ರಮದ ಸಮನ್ವಯಾಧಿಕಾರಿಗಳಾಗಿ ನೇಮಿಸುವುದು. ಸಮನ್ವಯಾಧಿಕಾರಿಗಳ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ವಿಳಾಸವನ್ನು ಕೇಂದ್ರ ಕಛೇರಿಗೆ ಕಳಿಸುವುದು.
2. ಪ್ರಾಂಶುಪಾಲರು ಮತ್ತು ಸಮನ್ವಯಾಧಿಕಾರಿಗಳ ನೇತೃತ್ವದಲ್ಲಿ ಜೀವವೈವಿಧ್ಯತೆಯ ಮತ್ತು ನೈಸರ್ಗಿಕ ಸಂಪತ್ತಿನ ಸಂರಕ್ಷಣೆಗೆ ಸಂಬಂಧಪಟ್ಟಂತೆ ಕೆಳಕಂಡ ಚಟುವಟಿಕೆಗಳನ್ನು ತಮ್ಮ ಕಾಲೇಜುಗಳಲ್ಲಿ ಕಡ್ಡಾಯವಾಗಿ ನಡೆಸುವಂತೆ ಸೂಚಿಸಲಾಗಿದೆ.

2

a) ಜೀವವೈವಿಧ್ಯತೆಯ ಸಂರಕ್ಷಣೆಯ ಕುರಿತು ಆಳವಾದ ತಿಳುವಳಿಕೆಯುಳ್ಳ ಮತ್ತು ಉತ್ತಮ ವಾಗ್ಮಿಗಳಾದ ಸಂಪನ್ಮೂಲ ವ್ಯಕ್ತಿಗಳಿಂದ ಕಾಲೇಜಿನಲ್ಲಿ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸುವುದು.

ಆ)ಜೀವವೈವಿಧ್ಯತೆಯ ಸಂರಕ್ಷಣೆಯ ಕುರಿತು Photo/ Picture Exhibition ಮತ್ತು Drawing ಕಾರ್ಯಕ್ರಮ

b) ಜೀವವೈವಿಧ್ಯತೆಯ ಸಂರಕ್ಷಣೆಯ ಕುರಿತ ಲೇಖನಗಳಿಗೆ ಮೀಸಲಾದ Wall Magazine ಪ್ರಾರಂಭಿಸುವುದು.

c) ಜೀವವೈವಿಧ್ಯತೆಯ ಸಂರಕ್ಷಣೆಯ ಕುರಿತು Films / Documentary films/ National Geographic CDs ಗಳನ್ನು ವಿದ್ಯಾರ್ಥಿಗಳಿಗೆ ತೋರಿಸುವುದು.

d) ಜೀವವೈವಿಧ್ಯತೆಯ ಸಂರಕ್ಷಣೆಯ ಕುರಿತು Camp ಗಳನ್ನು ಏರ್ಪಡಿಸುವುದು.

e) Rain Water harvesting, Organic farming, Compassionate treatment of animals, Measures to reduce pollution, Chemical-free insecticides and pesticides ಇತ್ಯಾದಿ ವಿಷಯಗಳ ಕುರಿತು ವಿದ್ಯಾರ್ಥಿಗಳಿಂದ ಪ್ರಾಜೆಕ್ಟ್ ಮಾಡಿಸುವುದು.

f) ಕಾಲೇಜುಗಳಲ್ಲಿ ಚಿಕ್ಕ Biodiversity park / Medicinal Plant nurseries/herbal garden ಗಳನ್ನು ನಿರ್ಮಿಸುವುದು.

g) ಸಾರ್ವಜನಿಕರಲ್ಲಿ ಜೀವವೈವಿಧ್ಯತೆಯ ಸಂರಕ್ಷಣೆಯ ಕುರಿತು ಅರಿವು ಮೂಡಿಸುವ ಜಾಥಾಗಳು/ಓಟಗಳು/ಪ್ರದರ್ಶನಗಳು/ಸಂವಾದಕಾರ್ಯಕ್ರಮಗಳು/ ಸಮ್ಮೇಳನಗಳು / ವಿಚಾರ ಸಂಕಿರಣಗಳು ಇತ್ಯಾದಿಗಳನ್ನು ಏರ್ಪಡಿಸುವುದು.

3) ಪ್ರತಿ ಸೆಮಿಸ್ಟರ್‌ನಲ್ಲಿ ಮೇಲೆ ಸೂಚಿಸಿರುವ ಕಾರ್ಯಕ್ರಮಗಳಲ್ಲಿ ಯಾವುದಾದರೂ ಎರಡು ಅಥವಾ ಹೆಚ್ಚು ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ತಮ್ಮ ಕಾಲೇಜುಗಳಲ್ಲಿ ಏರ್ಪಡಿಸುವುದು.

4) ಜೀವವೈವಿಧ್ಯತೆ ಸಂರಕ್ಷಣೆಯ ಕುರಿತು ತಮ್ಮ ಕಾಲೇಜಿನಲ್ಲಿ ನಡೆಸುತ್ತಿರುವ ಕಾರ್ಯಕ್ರಮಗಳ ಕುರಿತ ವರದಿ ಹಾಗೂ ದಾಖಲೆಗಳನ್ನು ಕಾಲೇಜಿನಲ್ಲಿ ಕಡ್ಡಾಯವಾಗಿ ನಿರ್ವಹಿಸುವುದು.

5) ಸದರಿ ಚಟುವಟಿಕೆಗಳ ಕುರಿತ ಮಾಸಿಕ ವರದಿಯನ್ನು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಮತ್ತು ಕಾಲೇಜು ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಗೆ ಸಾಫ್ಟ್ ಕಾಪಿ (dce.academic@gmail.com) ಮತ್ತು ಹಾರ್ಡ್ ಪ್ರತಿಗಳಲ್ಲಿ ತಪ್ಪದೆ ಸಲ್ಲಿಸುವುದು.

**ಹೆಚ್ಚಿನ ಮಾಹಿತಿಯನ್ನು ಈ ಕೆಳಗಿನ ಅಂತರ್ಜಾಲದ ವಿಳಾಸದಲ್ಲಿ ಪಡೆಯಬಹುದಾಗಿದೆ.**

**www.cbd.int/countries/?country=in** & www.nbaindia.org

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) – ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ನಂ.448, 4ನೇ ಮಹಡಿ, ಗೇಟ್ ನಂ.2, ಬಹುಮಹಡಿಗಳ ಕಟ್ಟಡ, ಡಾ. ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001.
3. ಕಛೇರಿ ಪ್ರತಿ.